ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಉಪಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ        ದಿನಾಂಕ : DATE : 19/2/2021

# ಮೇಲ್ಮನೆ: ಧರ್ಮೇಗೌಡ ಸ್ಥಾನಕ್ಕೆ ಮಾ.15ರಂದು ಚುನಾವಣೆ

**ಬೆಂಗಳೂರು:** ಎಸ್.ಎಲ್.ಧರ್ಮೇಗೌಡ ಅವರ ನಿಧನದಿಂದ ತೆರವಾಗಿರುವ ವಿಧಾನ ಪರಿಷತ್ತಿನ ಒಂದು ಸ್ಥಾನಕ್ಕೆ ಉಪಚುನಾವಣೆಗೆ ಗುರುವಾರ ವೇಳಾಪಟ್ಟಿ ಪ್ರಕಟವಾಗಿದ್ದು, ಮಾ.15ರಂದು ಚುನಾವಣೆ ನಡೆಯಲಿದೆ. ಈ ತಿಂಗಳ 25ರಂದು ಅಧಿಸೂಚನೆ ಹೊರಬೀಳಲಿದ್ದು, ನಾಮಪತ್ರ ಸಲ್ಲಿಸಲು ಮಾ.4 ಕೊನೆಯ ದಿನವಾಗಿದೆ. 5ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ನಾಮಪತ್ರ ವಾಪಸ್ ಪಡೆಯಲು ಮಾ.8 ಕೊನೆಯ ದಿನವಾಗಿದೆ. 15ರಂದು ಚುನಾವಣೆ ನಡೆದು ಅದೇ ದಿನ ಮತ ಎಣಿಕೆ ನಡೆಯಲಿದೆ. ವಿಧಾನಸಭೆಯಲ್ಲಿ ಆಡಳಿತ ಪಕ್ಷ ಬಿಜೆಪಿ ಸಂಖ್ಯಾಬಲ ಇರುವುದರಿಂದ ಈ ಸ್ಥಾನದಲ್ಲಿ ಬಿಜೆಪಿ ಗೆಲ್ಲುವುದು ನಿಶ್ಚಿತ. ಆದರೆ, ಬಿಜೆಪಿಯಲ್ಲಿ ಅಭ್ಯರ್ಥಿ ಯಾರಾಗಬಹುದು ಎಂಬುದು ಇನ್ನಷ್ಟೇ ಆಯ್ಕೆಯಾಗಬೇಕಿದೆ. ಎಚ್.ವಿಶ್ವನಾಥ್ ಸಚಿವ ಸ್ಥಾನದಿಂದ ವಂಚಿತರಾಗಿರುವ ಕಾರಣಕ್ಕೆ ಈ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಸದ್ಯ ನಾಮನಿರ್ದೇಶನಗೊಂಡಿರುವ ಅವರು, ಯಾವುದೇ ಸ್ಥಾನ ಅಲಂಕರಿಸುವಂತಿಲ್ಲ ಎಂದು ಸುಪ್ರೀಂ ತೀರ್ಪು ನೀಡಿದೆ.